# ತಾಂತ್ರಿಕ ಶಿಕ್ಷಣಕ್ಕೆ ಉಜ್ವಲ ಭವಿಷ್ಯ

ಬೆಳಗಾವಿ: ದೇಶದಲ್ಲಿ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಹೆಚ್ಚುತ್ತಿದ್ದು, ಮೌಲ್ಯಾಧಾರಿತ ಶಿಕ್ಷಣ ನೀಡುವುದು ಶಿಕ್ಷಣ ಸಂಸ್ಥೆಗಳ ಜವಾಬ್ದಾರಿಯಾಗಿದೆ ಎಂದು ದೆಹಲಿಯ ಅಖಿಲ ಭಾರತ ತಾಂತ್ರಿಕ ಶಿಕ್ಷಣ ಮಂಡಳಿಯ (ಎಐಸಿಟಿಇ) ಮುಖ್ಯಸ್ಥ ಪ್ರೊ. ಅನಿಲ ಸಹಸ್ರಬುಧೆ ಹೇಳಿದರು.

» ಕಾರ್ಯಾಗಾರದಲ್ಲಿ ಡಾ. ಅನಿಲ ಸಹಸ್ರಬುಧೆ ಅಭಿಮತ

ನಗರದ ಕೆ.ಎಲ್.ಇ. ಸಂಸ್ಥೆಯ ಡಾ. ಎಂ.ಎಸ್. ಶೇಷಗಿರಿ ಅಭಿಯಾಂತ್ರಿಕ ಮತ್ತು ತಾಂತ್ರಿಕ ಮಹಾವಿದ್ಯಾಲಯದಲ್ಲಿ ಸ್ಮಾರ್ಟ್ ಇಲೆಕ್ಟ್ರಾನಿಕ್ಸ್ ಸಿಸ್ಟಮ್ಸ್ ವಿಷಯ ಕುರಿತು ಆಯೋಜಿಸಿರುವ ಮೂರು ದಿನಗಳ ಅಂತಾರಾಷ್ಟ್ರೀಯ ಮಟ್ಟದ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು. ತಾಂತ್ರಿಕ ಶಿಕ್ಷಣಕ್ಕೆ ಉಜ್ವಲ ಭವಿಷ್ಯವಿದೆ. ವಿದ್ಯಾರ್ಥಿಗಳು ತಾಂತ್ರಿಕ ಶಿಕ್ಷಣ ಕಲಿಕೆಗೆ ಹೆಚ್ಚು ಆಸಕ್ತಿ ವಹಿಸಬೇಕು ಎಂದರು. ಇಂದಿನ ತಾಂತ್ರಿಕ ಯುಗದಲ್ಲಿ ವಿದ್ಯಾರ್ಥಿಗಳು ಶಿಕ್ಷಣ ಸಂಸ್ಥೆಗಳಿಗೆ ಸೇರುವ ಮೊದಲೇ ತಂತ್ರಜ್ಞಾನ ತಿಳಿದುಕೊಂಡಿರುತ್ತಾರೆ. ಇದನ್ನು ಎದುರಿಸಲು ಪ್ರಾಧ್ಯಾಪಕರು ನೂತನ ತಂತ್ರಜ್ಞಾನಗಳನ್ನು ಅಳವಡಿಸಿಕೊಂಡು ವಿದ್ಯಾರ್ಥಿಗಳ ಅಭಿರುಚಿಗೆ ತಕ್ಕಂತೆ ಬೋಧಿಸುವುದು ಇಂದಿನ ಅವಶ್ಯಕತೆ ಎಂದು ತಿಳಿಸಿದರು.

ನೂತನ ಆವಿಷ್ಕಾರಗಳಿಂದ ಮುಂದಿನ 4-5 ವರ್ಷಗಳಲ್ಲಿ ಇಂಜಿನಿಯರಿಂಗ್ ವಿದ್ಯಾರ್ಥಿಗಳು ಈಗ ಕಲಿತ ತಂತ್ರಜ್ಞಾನ ನಿರುಪಯುಕ್ತ. ಇಂಜಿನಿಯರಿಂಗ್ ವಿದ್ಯಾರ್ಥಿಗಳು ವಿದ್ಯಾರ್ಜನೆ ಜತೆಗೆ ನೂತನ ಆವಿಷ್ಕಾರಗಳನ್ನು ಅಳವಡಿಸಿಕೊಳ್ಳಬೇಕು. ತಾಂತ್ರಿಕ ಶಿಕ್ಷಣ ಮಂಡಳಿಯು ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಉನ್ನತ ಭಾರತ ಅಭಿಯಾನ ಪ್ರಾರಂಭಿಸಲಿದೆ ಎಂದರು.



ಬೆಳಗಾವಿ ನಗರದ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯಕ್ಕೆ ಶನಿವಾರ ಭೇಟಿ ನೀಡಿದ ಐಸಿಟಿ ನವದೆಹಲಿಯ ಚೇರ್ಮನ್ ಪ್ರೊ.ಅನಿಲ್ ಸಹಸ್ರಬುಧೆ ಅವರನ್ನು ಸನ್ಮಾನಿಸಲಾಯಿತು.

VK-5 22-5-2016